ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು):-

ಅ) ರೂ. 2761.62 ಕೋಟಿಗಳು (ಜನವರಿವರೆಗೆ)

ಆ) ತೆರಿಗೆ ವಸೂಲಾತಿಗಾಗಿ, ವಾಣಿಜ್ಯ ತೆರಿಗೆ ಕಾಯ್ದೆಗಳಡಿಯಲ್ಲಿ ಇರುವ ವ್ಯವಸ್ಥೆಯನ್ನು ಅನುಸರಿಸಿರುವುದಲ್ಲದೆ ಸರ್ಕಾರ ಹಾಗೂ ಇಲಾಖೆಯ ವಿವಿಧ ಮಟ್ಟಗಳಲ್ಲಿ ಕಾಲ ಕಾಲಕ್ಕೆ ಸಭೆ ನಡೆಸಿ ತೆರಿಗೆ ಸಂಗ್ರಹಣೆಯನ್ನು ಪರಿಶೀಲಿಸಲಾಗುತ್ತಿದೆ.

ವಿಷಯ:- ಹೊಸ ಪಶು ಆಸ್ಪತ್ರೆಗಳ ಕುರಿತು.

132(460)

ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):- ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ಪ್ರಸಕ್ತ ಸಾಲಿನಲ್ಲಿ ಎಷ್ಟು ಹೊಸ ಪಶು ಆಸ್ಪತ್ರೆಗಳನ್ನು ಪ್ರಾರಂಭಿಸಲು ಪ್ರಸ್ತಾಪಿಸಲಾಗಿದೆ;

ಆ) ಇವುಗಳ ಪೈಕಿ ಎಷ್ಟು ಪಶು ಆಸ್ಪತ್ರೆಗಳನ್ನು ಕುಣಿಗಲ್ ಕ್ಷೇತ್ರಕ್ಕೆ ಪ್ರಸ್ತಾಪಿಸಲಾಗಿದೆ?

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):-

ಅ) ಪ್ರಸಕ್ತ ಸಾಲಿನಲ್ಲಿ ಹೊಸ ಪಶು ಆಸ್ಪತ್ರೆಗಳನ್ನು ತೆರೆಯುವ ಉದ್ದೇಶವಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:- ಜಿಲ್ಲಾ ಪಂಚಾಯಿತ್ತಿನ ರಸ್ತೆಗಳ ಅಭಿವೃದ್ಧಿ.

133(467)

ಶ್ರೀ ಎಸ್.ಪಿ. ಮುದ್ದಹನುಮೇಗೌಡ (ಕುಣಿಗಲ್):- ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:-

ಅ) ರಾಜ್ಯದಲ್ಲಿ ಜಿಲ್ಲಾ ಪರಿಷತ್ತಿನ ರಸ್ತೆಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಸದರಿ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಗೆ ತೆಗೆದುಕೊಳ್ಳುವ ಪ್ರಸ್ತಾವನೆ ಇದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಪ್ರಗತಿಯ ಹಂತವೇನು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಮಂತ್ರಿಗಳು):-

ಅ) ಸಧ್ಯದಲ್ಲಿ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.